# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೇಳನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಮಂಗಳವಾರ, ದಿನಾಂಕ:09ನೇ ಡಿಸೆಂಬರ್, 2025**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎರಡನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎರಡನೆಯ ಪಟ್ಟಿ

### 02. ಶೂನ್ಯವೇಳೆ ಪ್ರಸ್ತಾವಗಳು

### 03. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಒಂದನೇ ಮತ್ತು ಎರಡನೇ ಪಟ್ಟಿಯ ರೀತ್ಯಾ.

### 04. ಅರ್ಜಿಗಳನ್ನೊಪ್ಪಿಸುವುದು

ಅ. **ಶ್ರೀ ಎಸ್.ಎಲ್. ಭೋಜೇಗೌಡ** ಅವರು ಚಿಕ್ಕಮಗಳೂರು ನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ಅಭಿವೃದ್ಧಿಪಡಿಸುತ್ತಿರುವ ಇಂದಾವರ ಗ್ರಾಮದ ವಸತಿ ಬಡಾವಣೆಯ ಭೂ ಮಾಲೀಕರಿಗೆ ಆಗಿರುವ ಅನ್ಯಾಯ–ಭ್ರಷ್ಟಾಚಾರ ಮತ್ತು ಅಲ್ಲಿ ನಡೆಯುತ್ತಿರುವ ಕಳಪೆ ಕಾಮಗಾರಿಗಳ ಕುರಿತು ಅರ್ಜಿಯನ್ನೊಪ್ಪಿಸುವುದು.

ಆ. **ಶ್ರೀ ರಮೇಶ್ ಬಾಬು** ಅವರು ಬೆಂಗಳೂರು ವಾರ್ಡ್ ನಂ.94 ಆಸ್ತಿ ಸಂಖ್ಯೆ:4ರಲ್ಲಿ ಕಾನೂನುಬಾಹಿರವಾಗಿ ನಕ್ಷೆ ಉಲ್ಲಂಘನೆ ಮಾಡಿ ಕಟ್ಟಡವನ್ನು ನಿರ್ಮಿಸುತ್ತಿದ್ದು, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವ ಕುರಿತು ಅರ್ಜಿಯನ್ನೊಪ್ಪಿಸುವುದು.

## 05. ಗಮನ ಸೆಳೆಯುವ ಸೂಚನೆಗಳು

01. **ಶ್ರೀಯುತರುಗಳಾದ ಎಸ್.ವ್ಹಿ. ಸಂಕನೂರ, ಎಸ್.ಎಲ್. ಭೋಜೇಗೌಡ, ಪುಟ್ಟಣ್ಣ, ಶಶೀಲ್ ಜಿ. ನಮೋಶಿ, ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್) ಹಾಗೂ ರಾಮೋಜಿಗೌಡ** ಅವರುಗಳು ರಾಜ್ಯ ಸರ್ಕಾರವು ಹೊರಡಿಸುತ್ತಿರುವ ಸುತ್ತೋಲೆಗಳಿಂದ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರು ಆತಂಕಕ್ಕೆ ಒಳಗಾಗಿರುವ ಬಗ್ಗೆ ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಗಮನ ಸೆಳೆಯುವುದು.

02. **ಶ್ರೀ ಐವನ್ ಡಿ'ಸೋಜಾ** ಅವರು ಕರಾವಳಿ ಕರ್ನಾಟಕ ಭಾಗದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಪಡಿಸಲು ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಇಲಾಖೆ ಕೈಗೊಂಡಿರುವ ವಿವಿಧ ಅಭಿವೃದ್ಧಿ ಯೋಜನೆಗಳ ಬಗ್ಗೆ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

03. **ಶ್ರೀ ತಿಪ್ಪಣ್ಣಪ್ಪ ಕಮಕನೂರ** ಅವರು ರಾಜ್ಯ ಸರ್ಕಾರವು ನಿಜಶರಣ ಅಂಬಿಗರ ಚೌಡಯ್ಯರವರ ಪ್ರತಿಮೆಯನ್ನು ಸ್ಥಾಪಿಸಲು ವಿಳಂಬ ನೀತಿ ಅನುಸರಿಸುತ್ತಿರುವ ಬಗ್ಗೆ ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

01. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ ಹಾಗೂ ಶ್ರೀ ಪಿ.ಹೆಚ್. ಪೂಜಾರ್** ಅವರುಗಳು ಕೃಷ್ಣಾ ಮೇಲ್ದಂಡೆ ಯೋಜನೆಯಡಿಯಲ್ಲಿ ವಸತಿ ಹಾಗೂ ಜಮೀನುಗಳನ್ನು ಕಳೆದುಕೊಂಡ ರೈತರಿಗೆ ಪುನರ್ ವಸತಿ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಉಪ ಮುಖ್ಯಮಂತ್ರಿಗಳು)

02. **ಶ್ರೀಯುತರುಗಳಾದ ಎಸ್.ಎಲ್. ಭೋಜೇಗೌಡ, ಪುಟ್ಟಣ್ಣ, ಶಶೀಲ್ ಜಿ. ನಮೋಶಿ ಮತ್ತು ಎಸ್.ವ್ಹಿ. ಸಂಕನೂರ, ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್) ಹಾಗೂ ರಾಮೋಜಿಗೌಡ** ಅವರುಗಳು ಸರ್ಕಾರಿ ಶಾಲೆ/ಅನುದಾನಿತ/ಅನುದಾನ ರಹಿತ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರುಗಳು ಕಾಲಕಾಲಕ್ಕೆ ಸಿಗಬೇಕಾದ ಬಡ್ತಿಯಿಂದ ವಂಚಿತರಾಗಿರುವುದನ್ನೊಳಗೊಂಡಂತೆ ಇನ್ನಿತರೆ ಸೌಲಭ್ಯಗಳು ದೊರಕದೆ ತೀವ್ರ ಸಮಸ್ಯೆಗಳನ್ನು ಎದುರಿಸುತ್ತಿರುವ ಕುರಿತು ಪ್ರಸ್ತಾಪಿಸುವುದು.(ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು)

03. **ಶ್ರೀ ಬಿ.ಜಿ. ಪಾಟೀಲ್** ಅವರು ಕಲ್ಯಾಣ ಕರ್ನಾಟಕ ಭಾಗದಲ್ಲಿ ಪಾರಂಪರಿಕ ವೈದ್ಯ ಪದ್ಧತಿಯನ್ನು ಬಳಸಿ ಕಾಯಿಲೆಗಳನ್ನು ಗುಣಪಡಿಸುವವರ ಮಕ್ಕಳಿಗೆ ಬಿ.ಎ.ಎಂ.ಎಸ್ ವಿದ್ಯಾಭ್ಯಾಸದಲ್ಲಿ ಶೇ.2ರಷ್ಟು ಮೀಸಲಾತಿ ಕಲ್ಪಿಸುವ ಕುರಿತು ಪ್ರಸ್ತಾಪಿಸುವುದು.(ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು)

04. **ಶ್ರೀ ಕೇಶವ ಪ್ರಸಾದ್ ಎಸ್**. ಅವರು ಉತ್ತರ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಪರಂಪರಾಗತ ನೇಕಾರಿಕೆಯೊಡನೆ ಆಧುನಿಕ ವಿದ್ಯುತ್ ಚಾಲಿತ ಮಗ್ಗಗಳು ಚಾಲನೆಯಲಿದ್ದು, ನೇಕಾರರ ಬದುಕು ಹಾಗೂ ಅವರು ಎದುರಿಸುತ್ತಿರುವ ಸಮಸ್ಯೆಗಳಿಗೆ ಪರಿಹಾರೋಪಾಯಗಳ ಕುರಿತು ಪ್ರಸ್ತಾಪಿಸುವುದು.(ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು)

೦೫. **ಡಾ: ತಳವಾರ್ ಸಾಬಣ್ಣ** ಅವರು ನ್ಯಾ. ಬಚಾವತ್ ಆಯೋಗದ ತೀರ್ಪಿನ ರೀತ್ಯಾ, ಕಲಬುರಗಿ, ವಿಜಯಪುರ ಹಾಗೂ ಯಾದಗಿರಿ ಜಿಲ್ಲೆಯ ಜನರು ಭೀಮಾ ನದಿಯ 15 ಟಿಎಂಸಿ ನೀರನ್ನು ಸಮರ್ಪಕವಾಗಿ ಬಳಕೆ ಮಾಡಿಕೊಳ್ಳಲು ಅನುವಾಗುವಂತೆ ಕ್ರಮಕೈಗೊಳ್ಳುವ ಕುರಿತು ಪ್ರಸ್ತಾಪಿಸುವುದು.(ಮಾನ್ಯ ಉಪ ಮುಖ್ಯಮಂತ್ರಿಗಳು)

## 07. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲಿನ ಚರ್ಚೆ

**ಶ್ರೀಯುತರುಗಳಾದ:**

| | |
|---|---|
| **ಮಾನ್ಯ ವಿರೋಧ ಪಕ್ಷದ ನಾಯಕರಾದ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಎನ್. ರವಿಕುಮಾರ್ ಹಾಗೂ ಮಾನ್ಯ ಶಾಸಕರುಗಳಾದ ಸಿ.ಟಿ. ರವಿ, ಎಸ್.ಎಲ್. ಭೋಜೇಗೌಡ, ಶರವಣ ಟಿ.ಎ. ಹಾಗೂ ಇತರರು** | ರಾಜ್ಯದಲ್ಲಿ ಕೃಷಿ ಬೆಳೆಗಳಿಗೆ ಬೆಂಬಲ ಬೆಲೆ ನಿಗದಿಪಡಿಸುವುದು ಹಾಗೂ ನಾಶಗೊಂಡ ಬೆಳೆಗಳಿಗೆ ಪರಿಹಾರ ಒದಗಿಸುವಲ್ಲಿ ವಿಳಂಬ ನೀತಿ ಅನುಸರಿಸುತ್ತಿರುವ ವಿಷಯದ ಕುರಿತು |

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**